ಕರ್ನಾಟಕ ಸರಕಾರ

G2C

**ಜಿಲ್ಲಾ ಪಂಚಾಯತ್, ಕಾರ್ಯಾಲಯ,ಶಿವಮೊಗ್ಗ**
**ಅಂಚೆ ಪೆಟ್ಟಿಗೆ ಸಂಖ್ಯೆ 127, ಕುವೆಂಪು ರಸ್ತೆ, ಶಿವಮೊಗ್ಗ 577201**
**ದೂರವಾಣಿ ಸಂಖ್ಯೆ:08182-223770** **ಇ-ಮೇಲ್** : ceo.shimoga@gmail.com

ಸಂಖ್ಯೆ : ಜಿಪಂಶಿ/ಸಿ(6)ಗ್ರಾಪಂ/ಗ್ರಂ.ಮೇ.ನೇ/2025-26 ದಿನಾಂಕ : 16-06-2026.

**:: ಅಧಿಸೂಚನೆ ::**

**ವಿಷಯ:** ಶಿವಮೊಗ್ಗ ಜಿಲ್ಲಾ ವ್ಯಾಪ್ತಿಯ ಗ್ರಾಮ ಪಂಚಾಯತಿ ಅರಿವು ಕೇಂದ್ರದ ಮೇಲ್ವಿಚಾರಕರ 14 ಖಾಲಿ ಹುದ್ದೆಗಳಿಗೆ ನೇಮಕಾತಿ ಮಾಡುವ ಕುರಿತು.

**ಉಲ್ಲೇಖ:1** ಸರ್ಕಾರದ ಅಧಿಸೂಚನೆ ಸಂಖ್ಯೆ:RDPR 156 GPA 2022 (ಇ) ದಿನಾಂಕ:14-11-2022.

**2** ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ನಡವಳಿಗಳು ದಿನಾಂಕ:06-06-2026

**3** ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 02 ಸೆಹಿಮ 2026, ದಿನಾಂಕ:13-05-2026

**4** ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸಹಿಮ 2023 ದಿನಾಂಕ:08-03-2023.

***_***

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ) ನಿಯಮಗಳು–2022 ಉಲ್ಲೇಖ (1) ರಂತೆ ಜಾರಿಗೊಳಿಸಲಾಗಿದೆ. ಉಲ್ಲೇಖ (1)ರ ಅಧಿಸೂಚನೆಯಲ್ಲಿರುವಂತೆ ಜಾರಿಯಲ್ಲಿರುವ ನಿಯಮಗಳಡಿಯಲ್ಲಿ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಖಾಲಿ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ನಿರ್ದೇಶನ ನೀಡಲಾಗಿದೆ.

ಉಲ್ಲೇಖ(2)ರ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಶಿವಮೊಗ್ಗ ರವರ ಅಧ್ಯಕ್ಷತೆಯಲ್ಲಿ ದಿನಾಂಕ:06-06-2026 ರಂದು ಜರುಗಿದ ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಆಯ್ಕೆ ಸಮಿತಿ ಸಭೆಯಲ್ಲಿ ಶಿವಮೊಗ್ಗ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಖಾಲಿ ಇರುವ 14 ಗ್ರಾಮ ಪಂಚಾಯಿತಿ ಅರಿವು ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗಳನ್ನು ಉಲ್ಲೇಖ(3) ಮತ್ತು (4)ರಂತೆ ರೋಸ್ಟರ್ ಬಿಂದುವನ್ನು ಗುರುತಿಸಿ ಈ ಕೆಳಕಂಡಂತೆ ನೇಮಕಾತಿ ಮಾಡಲು ತೀರ್ಮಾನಿಸಲಾಗಿರುತ್ತದೆ. ಆಸಕ್ತ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯನ್ನು **ಶಿವಮೊಗ್ಗ ಜಿಲ್ಲೆಯ ವೆಬ್ ಸೆಟ್** https://shivamogga.nic.in ರಲ್ಲಿ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ **ಅರ್ಜಿಯನ್ನು ದೃಢೀಕರಿಸಿದ ಅಗತ್ಯ ದಾಖಲೆಗಳೊಂದಿಗೆ ಸಂಬಂಧಿಸಿದ ಗ್ರಾಮ ಪಂಚಾಯತಿ ಕಛೇರಿಗೆ ರಜೆ ದಿನಗಳನ್ನು ಹೊರತುಪಡಿಸಿ ಅರ್ಜಿ ಸಲ್ಲಿಸುವ ಕೊನೆಯ ದಿ:08-07-2026 ಸಾಯಂಕಾಲ 5.30 ರೊಳಗಡೆ ಸಲ್ಲಿಸತಕ್ಕದ್ದು** ಹಾಗೂ ದಿ:09-07-2026 ರಂದು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ತಮಗೆ ಸಲ್ಲಿಕೆಯಾದ ಅರ್ಜಿಗಳನ್ನು ಸಂಬಂಧಪಟ್ಟ ತಾಲ್ಲೂಕು ಪಂಚಾಯತಿಗೆ ಸಲ್ಲಿಸುವುದು. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ ಇವರು ತಮಗೆ ಸಲ್ಲಿಕೆಯಾದ ಅರ್ಜಿಗಳನ್ನು ಕ್ರೂಢೀಕರಿಸಿ ದಿನಾಂಕ:10-07-2026 ರಂದು ಆಯ್ಕೆ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ಉಪ ಕಾರ್ಯದರ್ಶಿಗಳು ಜಿಲ್ಲಾ ಪಂಚಾಯತ್, ಶಿವಮೊಗ್ಗ ಇವರಲ್ಲಿ ಮುದ್ದಾಂ ಸಲ್ಲಿಸತಕ್ಕದ್ದು.

**ಪು.ತಿ.ನೋ**

**ಶಿವಮೊಗ್ಗ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಗ್ರಾಮ ಪಂಚಾಯತಿವಾರು, ಗ್ರಾಮ ಪಂಚಾಯತಿ ಅರಿವು ಕೇಂದ್ರಗಳ ಮೇಲ್ವಿಚಾರಕರ 14 ಖಾಲಿ ಹುದ್ದೆಗಳಿಗೆ ಉಲ್ಲೇಖ (3), (4) ರಂತೆ ಲಂಬ ಮತ್ತು ಸಮತಲ ಮೀಸಲಾತಿ ನಿಗದಿಪಡಿಸಿದ ವಿವರ ಈ ಕೆಳಗಿನಂತೆ ಇದೆ.**

| ಕ್ರಸಂ | ತಾಲ್ಲೂಕು | ಗ್ರಾಮ ಪಂಚಾಯತಿ / ಅರಿವು ಕೇಂದ್ರದ ಹೆಸರು | ಮೀಸಲಿರಿಸಿದ ರೋಸ್ಟರ್ ಬಿಂದು | | |
|---|---|---|---|---|---|
| | | | ಮೀಸಲಾತಿ ಬಿಂದು | ಲಂಬ (vertical) | ಅಡ್ಡ (horizontal) |
| 1 | ತೀರ್ಥಹಳ್ಳಿ | ಬಾಂಡ್ಯಕುಕ್ಕೆ | 15 | ಪ.ಜಾ(ಪ್ರ-ಸಿ) | ಇತರೆ |
| 2 | ಸಾಗರ | ಕುದರೂರು | 16 | ಸಾ.ಅ | ಇತರೆ |
| 3 | ಭದ್ರಾವತಿ | ವೀರಾಪುರ | 17 | ಪ್ರವರ್ಗ-III(ಎ) | ಇತರೆ |
| 4 | ಹೊಸನಗರ | ಸುಳುಗೋಡು | 18 | ಸಾ.ಅ | ಮ.ಅ |
| 5 | ಸೊರಬ | ಭಾರಂಗಿ | 19 | ಪ್ರವರ್ಗ-III(ಬಿ) | ಇತರೆ |
| 6 | ಹೊಸನಗರ | ತ್ರಿಣಿವೆ | 20 | ಸಾ.ಅ | ಗ್ರಾ.ಅ |
| 7 | ತೀರ್ಥಹಳ್ಳಿ | ಹೊಸಹಳ್ಳಿ | 21 | ಪ್ರವರ್ಗ-II(ಎ) | ಮ.ಅ |
| 8 | ಶಿಕಾರಿಪುರ | ಮುದ್ದನಹಳ್ಳಿ | 22 | ಸಾ.ಅ | ಅಂ.ವಿ |
| 9 | ಶಿವಮೊಗ್ಗ | ಚೋರಡಿ | 23 | ಪ.ಜಾ(ಪ್ರ-ಎ) | ಇತರೆ |
| 10 | ಭದ್ರಾವತಿ | ಕೂಡ್ಲಿಗೆರೆ | 24 | ಸಾ.ಅ | ಮ.ಅ |
| 11 | ಸಾಗರ | ಕಲ್ಮನೆ | 25 | ಪ್ರವರ್ಗ-II(ಎ) | ಅಂ.ವಿ |
| 12 | ಸೊರಬ | ಹರೀಶಿ | 26 | ಸಾ.ಅ | ಗ್ರಾ.ಅ |
| 13 | ಶಿಕಾರಿಪುರ | ಅಂಬಾರಗೊಪ್ಪ | 27 | ಪ.ಜಾ(ಪ್ರ-ಬಿ) | ಇತರೆ |
| 14 | ಸಾಗರ | ಹೆಗ್ಗೋಡು | 28 | ಸಾ.ಅ | ಇತರೆ |

**1) ಶೈಕ್ಷಣಿಕ ವಿದ್ಯಾರ್ಹತೆ :**

- ದ್ವಿತೀಯ ಪದವಿ ಪೂರ್ವ ಪರೀಕ್ಷೆ (ಪಿ.ಯು.ಸಿ)ಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ನಲ್ಲಿ ಪಮಾಣ ಪತ್ರ ಪಡೆದಿರತಕ್ಕದ್ದು ಹಾಗೂ ಕನಿಷ್ಟ ಮೂರು ತಿಂಗಳ ಮಾನ್ಯತೆ ಪಡೆದ ಸಂಸ್ಥೆಯಿಂದ ಕಂಪ್ಯೂಟರ್ ಕೋರ್ಸ್ ನಲ್ಲಿ ಉತ್ತೀರ್ಣರಾಗಿರಬೇಕು.
- ಒಂದು ವೇಳೆ ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ನಲ್ಲಿ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ ಪಿ.ಯು.ಸಿ ಪರೀಕ್ಷೆಯಲ್ಲಿ ಅಭ್ಯರ್ಥಿಯು ಗಳಿಸಿದ ಅಂಕಗಳನ್ನು ಆಧರಿಸಿ ಅಧಿಸೂಚಿಸಿದ ಖಾಲಿ ಹುದ್ದೆಗಳಿಗೆ ಮೀಸಲಾತಿ ಬಿಂದುವಿನಂತೆ ಆಯ್ಕೆಗೆ ಪರಿಗಣಿಸಲಾಗುವುದು.
- ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರಬೇಕು. ವಿದ್ಯಾರ್ಹತೆಯ ದಾಖಲಾತಿಗಳ ನೈಜತೆ ಬಗ್ಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ದೃಢೀಕರಿಸಿಕೊಂಡು ನಂತರ ನೇಮಕಾತಿ ಆದೇಶ ನೀಡಲಾಗುವುದು.
- ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮನವಾದ ಅಂಕಗಳನ್ನು ಮೆರಿಟ್ ಹೊಂದಿದ್ದು, ವಯಸ್ಸಿನ ಹಿರಿಯರಾದವರನ್ನು ಆಯ್ಕೆ ಮಾಡಲಾಗುವುದು. ಅದರಂತೆ ತಾತ್ಕಾಲಿಕ ಪಟ್ಟಿ ಪ್ರಕಟಿಸಲಾಗುವುದು.
- ಗ್ರಾಮ ಪಂಚಾಯತ್ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ತತ್ಸಮಾನ ವಿದ್ಯಾರ್ಹತೆ ಹೊಂದಿದ್ದಲ್ಲಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

**2) ವಾಸಸ್ಥಳ :**

ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸಂಬಂಧಪಟ್ಟ ಗ್ರಾಮ ಪಂಚಾಯತಿ ವ್ಯಾಪ್ತಿಯ ನಿವಾಸಿಯಾಗಿರತಕ್ಕದ್ದು. ಪರಂತು ಸಂಬಂಧಪಟ್ಟ ಗ್ರಾಮ ಪಂಚಾಯತಿ ವ್ಯಾಪ್ತಿಯ ನಿವಾಸಿ ಲಭ್ಯತೆ ಇಲ್ಲದಿದ್ದಲ್ಲಿ ಆಯಾ ತಾಲೂಕು ವ್ಯಾಪ್ತಿಯಲ್ಲಿನ ಹತ್ತಿರದ ಗ್ರಾಮ ಪಂಚಾಯತಿಯ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದು. ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರವಾದ ತಹಶೀಲ್ದಾರರಿಂದ ವಾಸಸ್ಥಳ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.

ಪು.ತಿ.ನೋ

3) **ವಯೋಮಿತಿ :**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಯು 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ ಗರಿಷ್ಠ ವಯೋಮಿತಿಯು ಈ ಕೆಳಕಂಡಂತೆ ಇರತಕ್ಕದ್ದು.

| | | |
|---|---|---|
| ಎ | ಸಾಮಾನ್ಯ ವರ್ಗ | 18 ರಿಂದ 35 ವರ್ಷ |
| ಬಿ | 2ಎ, 2ಬಿ, 3ಎ, 3ಬಿ | 18 ರಿಂದ 38 ವರ್ಷ |
| ಸಿ | ಪ.ಜಾತಿ / ಪ.ಪಂ / ಪ್ರವರ್ಗ-1 | 18 ರಿಂದ 40 ವರ್ಷ |

ಮೇಲ್ಕಂಡ ಗರಿಷ್ಠ ವಯೋಮಿತಿಯಲ್ಲದೆ ಕರ್ನಾಟಕ ನಾಗರೀಕಾ ಸೇವಾ (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಈ ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

- **ವಿಧವೆಯಾಗಿದ್ದಲ್ಲಿ :** ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆ ಎಂದು ಹಾಗೂ ಮರು ವಿವಾಹವಾಗಿರುವುದಿಲ್ಲವೆಂದು ಪ್ರಮಾಣ ಪತ್ರ ಸಲ್ಲಿಸಿದಲ್ಲಿ 10 ವರ್ಷಗಳ ವಯೋಮಿತಿಯಲ್ಲಿ ಹೆಚ್ಚಿಸಲಾಗುವುದು.
- **ಅಂಗವಿಕಲ :** ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ಅಂಗವಿಕಲ ಅಭ್ಯರ್ಥಿಯೆಂದು ಪಡೆದ ಪ್ರಮಾಣ ಪತ್ರ ಸಲ್ಲಿಸಿದಲ್ಲಿ 10 ವರ್ಷಗಳ ವಯೋಮಿತಿಯಲ್ಲಿ ಹೆಚ್ಚಿಸಲಾಗುವುದು.
- **National Cadet Corps** ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ **Cadet** ಪರಿವೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.
- **ಗ್ರಾಮೀಣ ಅಭ್ಯರ್ಥಿ:** ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1ರಿಂದ 10ನೇ ತರಗತಿವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಈ ಪ್ರಮಾಣ ಪತ್ರಗಳು ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

1) ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2ರ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1ರಲ್ಲಿ ಅವರು ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರ ರವರಿಂದ ಪಡೆದಿರತಕ್ಕದ್ದು.

**ಸೂಚನೆ:**

ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ-2 ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಯರಿಂದ ಪಡೆದು ಅದಕ್ಕೆ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು.

4) **ಜನ್ಮ ದಿನಾಂಕ :**

ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುತ್ತದೆ. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸುವುದಿಲ್ಲ.

5) **ಅರ್ಜಿ ಸಲ್ಲಿಸುವ ವಿಧಾನ :**

ವೆಬ್ ಸೆಟ್ https://shivamogga.nic.in ರಲ್ಲಿ ಡೌನ್‌ಲೋಡ್ ಮಾಡಿಕೊಂಡ ಅರ್ಜಿಯನ್ನು ಭರ್ತಿಮಾಡಿ ದಾಖಲೆಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ನೇರವಾಗಿ ಸಂಬಂಧಪಟ್ಟ ಗ್ರಾಮ

ಪು.ತಿ.ನೋ

ಪಂಚಾಯತಿ ಅಭಿವೃದ್ಧಿ ಅಧಿಕಾರಿಯವರಲ್ಲಿ ದ್ವಿ-ಪ್ರತಿಯಲ್ಲಿ ಸಲ್ಲಿಸಲು ತಿಳಿಸಿದೆ. ಅರ್ಜಿಗಳನ್ನು ಖುದ್ದಾಗಿ ಅಥವಾ ನೊಂದಾಯಿತ ಅಂಚೆ ಮೂಲಕ ಸಲ್ಲಿಸಲು ಮಾತ್ರ ಅವಕಾಶ ಇರುತ್ತದೆ. ಅಂಚೆ ಮೂಲಕ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಲಕೋಟೆಯ ಮೇಲೆ ದಪ್ಪ ಅಕ್ಷರದಲ್ಲಿ ಗ್ರಾಮ ಪಂಚಾಯತಿ ಅರಿವು ಕೇಂದ್ರದ ಮೇಲ್ವಿಚಾರಕ ಹುದ್ದೆಗೆ ನೇಮಕಾತಿ ಎಂದು ಬರೆದಿರಬೇಕು.

**6) ಅರ್ಜಿ ಶುಲ್ಕ :**

ಗ್ರಾಮ ಪಂಚಾಯತಿ ಅರಿವು ಕೇಂದ್ರಗಳ ಮೇಲ್ವಿಚಾರಕ ಹುದ್ದೆಗೆ ನೇಮಕಾತಿ ಮಾಡಿಕೊಳ್ಳುತ್ತಿರುವುದರಿಂದ ಅರ್ಜಿ ಶುಲ್ಕ ಇರುವುದಿಲ್ಲ.

**7) ಜಾತಿ ಮೀಸಲಾತಿ ಪ್ರಮಾಣ ಪತ್ರ :**

ಜಾತಿ ಮೀಸಲಾತಿ ಬಯಸುವ ಅಭ್ಯರ್ಥಿಗಳು ತಮಗೆ ಮೀಸಲಿರಿಸಿದ ನಿಗದಿತ ನಮೂನೆಯಲ್ಲಿ ಜಾತಿ ಪ್ರಮಾಣ ಪತ್ರವನ್ನು ತಹಶೀಲ್ದಾರರಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗಡೆ ಪಡೆದಿರಬೇಕು.

ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಕೆಳಕಂಡಂತೆ ನಮೂನೆಗಳಲ್ಲಿ ದಾಖಲೆಗಳನ್ನು ಪಡೆದಿರಬೇಕು.

- ಮೀಸಲಾತಿ ಪ್ರಮಾಣ ಪತ್ರಗಳನ್ನು ಅಭ್ಯರ್ಥಿಗಳು ಪಡೆದ ದಿನಾಂಕದಿಂದ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ 05 ವರ್ಷಗಳ ಅವಧಿಯಲ್ಲಿರಬೇಕು, ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ. ಮೀಸಲಾತಿ ಪ್ರಮಾಣ ಪತ್ರ ಜಾರಿ ಮಾಡಿದ್ದ ದಿನಾಂಕವನ್ನು ಅರ್ಜಿಯ ನಿಗದಿತ ಸ್ಥಳದಲ್ಲಿ ತಪ್ಪದೇ ನಮೂದಿಸಬೇಕು ಹಾಗೂ ಸಂದರ್ಶನ ಅರ್ಹರಾಗಿ ಹಾಜರಾದಾಗ ಅದರ ಮೂಲ ಪ್ರಮಾಣ ಪತ್ರವನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು.

**8) ಆಯ್ಕೆ ವಿಧಾನ :**

- ಶೈಕ್ಷಣಿಕ ಅರ್ಹತೆಯಲ್ಲಿನ ಮೆರಿಟ್ ಮತ್ತು ರೋಷ್ಟರ್ ಮೀಸಲಾತಿ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.
- ಹುದ್ದೆಗೆ ಸಂಬಂಧಿಸಿದಂತೆ ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ ಪಿ.ಯು.ಸಿ. ಪರೀಕ್ಷೆಯಲ್ಲಿ ಅಭ್ಯರ್ಥಿಯು ಗಳಿಸಿದ ಅಂಕಗಳನ್ನು ಆಧರಿಸಿ ಮೀಸಲಾತಿ ಬಿಂದುವಿನಂತೆ ಆಯ್ಕೆಗೆ ಪರಿಗಣಿಸಲಾಗುವುದು. ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು / ಮೆರಿಟನ್ನು ಹೊಂದಿದಲ್ಲಿ ವಯಸ್ಸಿನಲ್ಲಿ ಹಿರಿಯರಾದವರನ್ನು ಆಯ್ಕೆಗೆ ಪರಿಗಣಿಸಲಾಗುವುದು.
- ಗ್ರಾಮ ಪಂಚಾಯತಿವಾರು ಬಂದಿರುವ ಅರ್ಜಿಗಳನ್ನು ಮೆರಿಟ್ ಆಧಾರದ ಮೇಲೆ ಖಾಲಿ ಹುದ್ದೆಗಳಿಗೆ (ರೋಸ್ಟರ್ ಬಿಂದುವಿನಂತೆ) ಸಮನಾಗಿ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರವಾರು ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು.

**9) ಸರ್ಕಾರದ ಆದೇಶ ಸಂಖ್ಯೆ:ಕಪಂರಾಆ/ಅಭಿವೃದ್ಧಿ/386/2025. ದಿ:05-05-2025.** ರಂತೆ ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರಿಗೆ ಪ್ರತಿ ಮಾಹೆ ಮಾಸಿಕ ಕನಿಷ್ಠ ವೇತನ ರೂ.19201.32 ಹಾಗೂ ಕನಿಷ್ಠ ವೇತನದ ಜೊತೆಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗದಿಪಡಿಸುವ ವ್ಯತ್ಯಯವಾಗುವ ತುಟ್ಟಿ ಭತ್ಯೆಯನ್ನು (VDA) ಪಾವತಿಸಲಾಗುವುದು.

**ಪು.ತಿ.ನೋ**

**ಸಾಮಾನ್ಯ ಸೂಚನೆಗಳು :**

- ಅಭ್ಯರ್ಥಿಯು ತನ್ನ ಇತ್ತೀಚಿನ 2 ಪಾಸ್ ಪೋರ್ಟ್ ಸೈಜಿನ ಭಾವಚಿತ್ರಗಳನ್ನು ಲಗತ್ತಿಸಬೇಕು.
- ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಪತ್ರಾಂಕಿತ ಅಧಿಕಾರಿಯ ದೃಢೀಕರಣದೊಂದಿಗೆ ದ್ವಿ-ಪ್ರತಿಯಲ್ಲಿ ಸಲ್ಲಿಸುವುದು.
- ಕನಿಷ್ಠ 3 ತಿಂಗಳ ತರಬೇತಿ ಹೊಂದಿದ ಗಣಕಯಂತ್ರ ಪ್ರಮಾಣ ಪತ್ರ ಸಲ್ಲಿಸುವುದು.
- ಕಾನೂನು ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿದ್ದು ಕಂಡುಬಂದಿದ್ದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.
- ಅರ್ಜಿಯಲ್ಲಿ ತಪ್ಪು / ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
- ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಆಯ್ಕೆ ಸಮಿತಿಯ ಅಧ್ಯಕ್ಷರಾಗಿದ್ದು, ಜಿಲ್ಲೆಯನ್ನು ರೋಸ್ಟರ್ ಬಿಂದುಗಾಗಿ ಒಂದು ಯುನಿಟ್ ಎಂದು ಪರಿಗಣಿಸಿ ಸರ್ಕಾರವು ಕಾಲ ಕಾಲಕ್ಕೆ ಹೊರಡಿಸುವ ಮಾರ್ಗಸೂಚಿಗನುಸಾರ ಕ್ರಮವಹಿಸುವ ಷರತ್ತುಗೊಳಪಟ್ಟಿರುತ್ತದೆ.
- ಅರ್ಜಿಯಲ್ಲಿ ನೀಡುವ ವಿಳಾಸ ಮತ್ತು ಮೋಬೈಲ್ ಸಂಖ್ಯೆಯೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
- ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ
- ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ.
- ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿ ಮುಂದೂಡುವ, ರದ್ದುಗೊಳಿಸುವ ಮತ್ತು ನಿರ್ಬಂಧನೆಗಳನ್ನು ಬದಲಾಯಿಸುವ ಅಧಿಕಾರವನ್ನು ನೇಮಕಾತಿ ಪ್ರಾಧಿಕಾರ ಹೊಂದಿರುತ್ತದೆ.
- ಈಗಾಗಲೇ ಪುರುಷ ಮತ್ತು ಮಹಿಳಾ ವ್ಯಕ್ತಿಯು ಎರಡನೆಯ ಮದುವೆಯಾಗಿದ್ದರೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿಯನ್ನು ಪಡೆಯದಿದ್ದರೆ ಅಂತಹ ನೇಮಕಾತಿಗೆ ಅರ್ಹರಾಗುವುದಿಲ್ಲ.
- ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪಂಚಾಯಿತಿ / ತಾಲ್ಲೂಕು ಪಂಚಾಯಿತಿ / ಗ್ರಾಮ ಪಂಚಾಯಿತಿ ಸಂಪರ್ಕಿಸತಕ್ಕದ್ದು.
- ಅಭ್ಯರ್ಥಿಯು ಆಧಾರ ಕಾರ್ಡ್ ಅಥವಾ ಓಟರ್ ಐಡಿ ಇನ್ನಿತರೇ ಗುರುತಿನ ಚೀಟಿಯನ್ನು ಲಗತ್ತಿಸಬೇಕು.
- ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ದಿನಾಂಕವು ಸಾರ್ವಜನಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವನ್ನು ಅರ್ಜಿ ಸ್ವೀಕರಿಸಲು ಕೊನೆ ದಿನಾಂಕವಾಗಿರುತ್ತದೆ.

| **ಅರ್ಜಿಗಳನ್ನು ಪ್ರಾರಂಭ ಮಾಡುವ ದಿನಾಂಕ** | **ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ** |
|---|---|
| **19-06-2026** | **08-07-2026** |

- ಅರ್ಜಿಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಾರ್ಯಾಲಯ ಜಿಲ್ಲಾ ಪಂಚಾಯತ್, ಶಿವಮೊಗ್ಗದಲ್ಲಿ ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತಿ ಶಿವಮೊಗ್ಗ/ಭದ್ರಾವತಿ/ಸಾಗರ/ಸೊರಬ/ಶಿಕಾರಿಪುರ/ತೀರ್ಥಹಳ್ಳಿ/ಹೊಸನಗರ ಹಾಗೂ ಹುದ್ದೆ ಖಾಲಿ ಇರುವ ಗ್ರಾಮ ಪಂಚಾಯತಿಗಳಲ್ಲಿ ವೆಬ್‌ಸೈಟ್‌ನಲ್ಲಿ ದಿ: 08-07-2026 ರ ಸಂಜೆ 5.30 ರವರೆಗೆ ಮಾತ್ರ ಲಭ್ಯವಿರುತ್ತದೆ. ಅರ್ಜಿಗಳನ್ನು ನೇರವಾಗಿ **"ಸಂಬಂಧ ಪಟ್ಟ ಗ್ರಾಮ ಪಂಚಾಯತಿಯ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು" ಈ ವಿಳಾಸಕ್ಕೆ ಮಾತ್ರ ಸಲ್ಲಿಸತಕ್ಕದ್ದು,** ಅರ್ಜಿಗಳನ್ನು ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಮೂಲಕ ಸಲ್ಲಿಸಲು ಅವಕಾಶ ಇರುತ್ತದೆ. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ

- ದಿನಾಂಕ:08-07-2026 ರಂದು ಕಚೇರಿ ಸಮಯ ಸಾಯಂಕಾಲ 5.30 ಗಂಟೆ ಮುಗಿದ ನಂತರ ಸ್ವೀಕೃತವಾಗುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾಗುವ ಅಭ್ಯರ್ಥಿಗಳಿಗೆ ಅಂಚೆ ಹಾಗೂ ಕಛೇರಿ ದೂರವಾಣಿ ಮೂಲಕ ಮಾಹಿತಿ ನೀಡಲಾಗುವುದು. ಕಡ್ಡಾಯವಾಗಿ ಅರ್ಜಿಯಲ್ಲಿ ನಮೂದಿಸಿದ ಎಲ್ಲಾ ಮೂಲ ದಾಖಲೆಗಳನ್ನು ಸಲ್ಲಿಸತಕ್ಕದ್ದು.
- ನಿಗದಿಪಡಿಸಿದ ದಿನಾಂಕದಂದು ದಾಖಲಾತಿಗಳ ಪರಿಶೀಲನೆಗೆ ಹಾಜರಾಗದೇ ಇರುವ ಅಭ್ಯರ್ಥಿಗಳು ಅನರ್ಹಗೊಳ್ಳುತ್ತಾರೆ ಹಾಗೂ ಅವರ ಹೆಸರನ್ನು ನೇಮಕಾತಿ ಪ್ರಕ್ರಿಯೆಯಿಂದ ಕೈಬಿಡಲಾಗುವುದು.
- ಅರ್ಜಿಯಲ್ಲಿ ಕೇಳಿರುವ ಪೂರ್ಣ ಮಾಹಿತಿಯನ್ನು ಭರ್ತಿ ಮಾಡಿಲ್ಲದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೇ ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಓದಲು, ಬರೆಯಲು ಮತ್ತು ಅರ್ಥ ಮಾಡಿಕೊಳ್ಳುವ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ. ಹಾಗೂ ಸರ್ಕಾರಿ ನಿಯಮಾನುಸಾರ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ತೇರ್ಗಡೆಯಾಗುವುದು.
- ಹೆಚ್ಚಿನ ವಿವರಗಳಿಗಾಗಿ ವೆಬ್‌ಸೈಟ್ https://shivamogga.nic.in ರಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ ಮತ್ತು ಸ್ಪಷ್ಟೀಕರಣ ಅವಶ್ಯವಿದ್ದಲ್ಲಿ ಸಹಾಯವಾಣಿ ಸಂಖ್ಯೆ:9901753914 ಗೆ ಕಛೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.
- ಅರ್ಜಿದಾರರು ಮೀಸಲಾತಿಗೆ ಸಂಬಂಧಪಟ್ಟ ಎಲ್ಲಾ ದಾಖಲಾತಿಗಳನ್ನು ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕದೊಳಗಾಗಿ ಪಡೆದಿರತಕ್ಕದ್ದು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ
ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರ
ನೇಮಕಾತಿ ಅಧ್ಯಕ್ಷರು,
ಜಿಲ್ಲಾ ಪಂಚಾಯತ್, ಶಿವಮೊಗ್ಗ

**ಪ್ರತಿಯನ್ನು :**

1) ಮಾನ್ಯಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ಜಿಲ್ಲಾ ಸೂಚನಾ ವಿಜ್ಞಾನಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ ರವರಿಗೆ https://shivamogga.nic.in ರ ವೆಬ್ ಸೈಟ್ ನಲ್ಲಿ ಪ್ರಕಟಿಸುವುದು.
3) ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ್, ಶಿವಮೊಗ್ಗ/ಭದ್ರಾವತಿ/ಸಾಗರ/ ಸೊರಬ/ತೀರ್ಥಹಳ್ಳಿ/ಹೊಸನಗರ/ಶಿಕಾರಿಪುರ. ಇವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
4) ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ, ಚೋರಡಿ, ವೀರಾಪುರ, ಕೂಡ್ಲಿಗೆರೆ, ಕುದರೂರು, ಕಲ್ಮನೆ, ಭಾರಂಗಿ, ಹರೀಶಿ, ಮುದ್ದನಹಳ್ಳಿ, ಅಂಬಾರಗೊಪ್ಪ, ಹೊಸಹಳ್ಳಿ, ಬಾಂಡ್ಯಕುಕ್ಕೆ ಮತ್ತು ತ್ರಿಣಿವೆ ಮತ್ತು ಸುಳೂಗೋಡು ಇವರಿಗೆ ನೀಡುತ್ತಾ, ಸದರಿ ನೇಮಕಾತಿ ಬಗ್ಗೆ ಗ್ರಾ.ಪಂ. ಕಾರ್ಯಾಲಯದ ಸೂಚನಾ ಫಲಕಕ್ಕೆ ಲಗತ್ತಿಸುವುದು ಹಾಗೂ ಗ್ರಾಮದಲ್ಲಿ ಸ್ವಚ್ಛ ವಾಹಿನಿಮುಖಾಂತರ ಸಾರುವುದು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಮಾಹಿತಿ ಲಭ್ಯವಾಗುವಂತೆ ವ್ಯಾಪಕ ಪ್ರಚಾರ ಮಾಡುವುದು.
5) ಕಛೇರಿ ಪ್ರತಿ.

# ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಹುದ್ದೆಗೆ ನೇಮಕಾತಿ ಅರ್ಜಿ ನಮೂನೆ

ಇತ್ತೀಚಿನ ಭಾವಚಿತ್ರ ಪಾಸ್ ಪೋರ್ಟ್ ಸೈಜ್ ಲಗತ್ತಿಸುವುದು

**ಇವರಿಗೆ,**
ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರ ನೇಮಕಾತಿ ಸಮಿತಿ
ಸದಸ್ಯ ಕಾರ್ಯದರ್ಶಿ, ಹಾಗೂ ಉಪ ಕಾರ್ಯದರ್ಶಿ(ಆಡಳಿತ)
ಜಿಲ್ಲಾ ಪಂಚಾಯತ್, ಶಿವಮೊಗ್ಗ.

ಮಾನ್ಯರೇ,

ಶಿವಮೊಗ್ಗ ಜಿಲ್ಲಾ ವ್ಯಾಪ್ತಿಯ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಹುದ್ದೆಗೆ ನೇಮಕಾತಿ ಈ ಕೆಳಗಿನ ಮಾಹಿತಿ ಹಾಗೂ ಅಗತ್ಯ ದಾಖಲಾತಿಯೊಂದಿಗೆ ನನ್ನ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ.

| | |
|---|---|
| ಅಭ್ಯರ್ಥಿಯ ಹೆಸರು (ಎಸ್.ಎಸ್.ಎಲ್.ಸಿ ಅಂಕ ಪಟ್ಟಿಯಲ್ಲಿರುವಂತೆ) | |
| ತಾಯಿ/ತಂದೆ/ಗಂಡನ ಹೆಸರು | |
| ಜನ್ಮ ದಿನಾಂಕ (ಎಸ್.ಎಸ್.ಎಲ್.ಸಿ ಅಂಕ ಪಟ್ಟಿಯಲ್ಲಿರುವಂತೆ) ಪ್ರಮಾಣ ಪತ್ರ ಲಗತ್ತಿಸುವುದು | |
| ಲಿಂಗ | |
| ಜಾತಿ/ವರ್ಗ ನಮೂದಿಸುವುದು (ಜಾತಿ ಪ್ರಮಾಣ ಪತ್ರವನ್ನು ಲಗತ್ತಿಸುವುದು) | |
| ವಿವಾಹಿತ/ಅವಿವಾಹಿತ/ವಿಧವೆ | |
| ಅರ್ಜಿ ಸಲ್ಲಿಸಿದ ಹುದ್ದೆಯ ಹೆಸರು | |
| ಅರ್ಜಿ ಸಲ್ಲಿಸಿದ ಗ್ರಾಮ ಪಂಚಾಯತಿ ಹೆಸರು ಹಾಗೂ ತಾಲೂಕು | |
| ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಾಸಿರುವ ಬಗ್ಗೆ ತಹಶೀಲ್ದಾರ ರವರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ. | |
| ಅಭ್ಯರ್ಥಿಯ ಖಾಯಂ ವಿಳಾಸ | |
| ಮೊಬೈಲ್ ಸಂಖ್ಯೆ; | |
| ಆಧಾರ್ ಕಾರ್ಡ್ ಸಂಖ್ಯೆ | |
| ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪ್ರಮಾಣ ಪತ್ರ / ಪಿ.ಯು.ಸಿ. ವಿದ್ಯಾರ್ಹತೆ (ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ ಪಿ.ಯು.ಸಿ. ವಿದ್ಯಾರ್ಹತೆ ಪಡೆದಿರಬೇಕು) ಅಂಕಪಟ್ಟಿ ಲಗತ್ತಿಸುವುದು. | |
| | |

| | |
|---|---|
| ಅಂಗವಿಕಲ ಅಭ್ಯರ್ಥಿಯು (ಹೌದು/ಇಲ್ಲ) ಜಿಲ್ಲಾ ಸರ್ಜನ್ ರವರಿಂದ ಪಡೆದ ಪ್ರಮಾಣ ಪತ್ರವನ್ನು ಲಗತ್ತಿಸುವುದು. | |
| ಗ್ರಾಮೀಣ ಅಭ್ಯರ್ಥಿಯು (ಹೌದು/ಇಲ್ಲ) (1 ರಿಂದ 10ನೇ ತರಗತಿ ವ್ಯಾಸಂಗ ಪ್ರಮಾಣ ಪತ್ರವನ್ನು ಮುಖ್ಯೋಪಾಧ್ಯಾಯರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಿದ ಪ್ರಮಾಣ ಪತ್ರವನ್ನು ಲಗತ್ತಿಸುವುದು) | |
| ಗಣಕಯಂತ್ರ ಪ್ರಮಾಣ ಪತ್ರ (ಕನಿಷ್ಠ 3 ತಿಂಗಳು) | |

ಈ ಮೇಲ್ಕಂಡ ಮಾಹಿತಿಗಳಿಗೆ ಪೂರಕ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸುತ್ತಿದ್ದು, (ಪ್ರತಿಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಲಾಗಿದೆ) ಮೇಲಿನ ಎಲ್ಲಾ ಸ್ವವಿವರ ಮಾಹಿತಿ ಸರಿಯಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಅಭ್ಯರ್ಥಿಯ ಸಹಿ ಮತ್ತು ಹೆಸರು

ದಿನಾಂಕ:
ಸ್ಥಳ :